**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

ಸಂಖ್ಯೆ: ಕಪಂರಾಆ/ಅಭಿವೃದ್ಧಿ/ರಾಹೆಮದಿ/27/2024 ದಿನಾಂಕ:23-01-2024

Comp. No.:1298133

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ **"ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ"** ಅಂಗವಾಗಿ 24 ಜನವರಿ 2024 ರಿಂದ 15ನೇ ಫೆಬ್ರುವರಿ 2024ರ ವರೆಗೆ **ಗ್ರಾಮೀಣ ಒಲಿಂಪಿಕ್ಸ್ (Rural Olympics)** ಕ್ರೀಡೆಗಳನ್ನು ಹಾಗೂ ಇತರೆ ಚಟುವಟಿಕೆಗಳನ್ನು ಆಯೋಜಿಸುವ ಕುರಿತು.

**ಉಲ್ಲೇಖ**: 1. ಸುತ್ತೋಲೆ ಸಂಖ್ಯೆ: ಕಪಂರಾಆ/ ಅಭಿವೃದ್ಧಿ/ ರಾಹೆಮದಿ/ 42/ 2023 ದಿನಾಂಕ: 21-01-2023

2. ಸುತ್ತೋಲೆ ಸಂಖ್ಯೆ: ಕಪಂರಾಆ/ಅಭಿವೃದ್ಧಿ/556/2023 ದಿನಾಂಕ: 07-11-2023

ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯನ್ನು 2008ರಿಂದ ಪ್ರತೀ ವರ್ಷವೂ ಆಚರಿಸಲಾಗುತ್ತಿದ್ದು, ಹೆಣ್ಣು ಮಕ್ಕಳು ಎದುರಿಸುತ್ತಿರುವ ಸಮಸ್ಯೆಗಳು ಮತ್ತು ಸವಾಲುಗಳ ಬಗ್ಗೆ ಜಾಗೃತಿ ಮೂಡಿಸಲು ಹಾಗೂ ಅವರ ಹಕ್ಕುಗಳು ಮತ್ತು ಸಬಲೀಕರಣವನ್ನು ಉತ್ತೇಜಿಸಲಾಗುತ್ತಿದೆ.

ಕಳೆದ ವರ್ಷಗಳಂತೆ, ಈ ಬಾರಿಯೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇತರೆ ಇಲಾಖೆಗಳ ಮತ್ತು ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮತ್ತು ಗ್ರಂಥಾಲಯಗಳಲ್ಲಿ **24 ಜನವರಿ 2024 ರಿಂದ 15ನೇ ಫೆಬ್ರುವರಿ 2024 ರವರೆಗೆ "ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ"ಯ ಅಂಗವಾಗಿ ಗ್ರಾಮೀಣ ಒಲಿಂಪಿಕ್ಸ್ ಕ್ರೀಡೆಗಳನ್ನು ಹಾಗೂ ಇತರೆ ಚಟುವಟಿಕೆಗಳನ್ನು** ಆಯೋಜಿಸಲು ಉದ್ದೇಶಿಸಲಾಗಿದೆ.

ಗ್ರಾಮೀಣ ಒಲಿಂಪಿಕ್ಸ್‌ಗಳ ಮೂಲಕ ಜನರಲ್ಲಿ ಕ್ರೀಡಾ ಮನೋಭಾವನೆಯನ್ನು ಬೆಳೆಸಲು ಹಾಗೂ ಕ್ರೀಡೆಗಳಲ್ಲಿ ಮಹಿಳೆಯರಿಗೆ ಭಾಗವಹಿಸಲು ಸಮಾನ ಅವಕಾಶವನ್ನು ನೀಡುವಂತೆ ಉತ್ತೇಜಿಸಲು ಉದ್ದೇಶಿಸಲಾಗಿದ್ದು, ಜೊತೆಯಲ್ಲಿ ಈ ಕೆಳಗಿನ ಅಂಶಗಳ ಬಗ್ಗೆಯೂ ಸಹ ಜಾಗೃತಿಯನ್ನು ಮೂಡಿಸಲು ಕ್ರಮಗಳನ್ನು ಕೈಗೊಳ್ಳುವುದು. ಉಲ್ಲೇಖ(1)ರ ಸುತ್ತೋಲೆಯ ಅನುಬಂಧದಲ್ಲಿ ತಿಳಿಸಿರುವ ಚಟುವಟಿಕೆಗಳನ್ನು ಹಾಗೂ ಪ್ರತಿಜ್ಞೆಯನ್ನು ಕೈಗೊಳ್ಳುವುದು.

- ✓ **ಶಿಕ್ಷಣ:-** ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಗಮನ ಕೊಡಬೇಕಾಗಿದೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಮಹಿಳೆಯರ ಸಾಕ್ಷರತೆಯ ಪ್ರಮಾಣವು ಪುರುಷರ ಸಾಕ್ಷರತೆಯ ಪ್ರಮಾಣಕ್ಕೆ ಹೋಲಿಸಿದರೆ ಕಡಿಮೆಯಿದೆ.ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ನಾವು ಅವರನ್ನು ಬೆಳೆಯಲು ಮತ್ತು ಸಬಲೀಕರಣ ಹೊಂದಲು ಸಾಧ್ಯವಾಗುವಂತೆ ಮಾಡುವುದು.

- ✓ **ಹೆಣ್ಣು ಮಕ್ಕಳ ಪೌಷ್ಟಕತೆ:-** ಅಪೌಷ್ಟಿಕತೆ,ರಕ್ತಹೀನತೆ ಮತ್ತು ವಿಟಮಿನ್ ಎ ಕೊರತೆಯಂತಹ ಸಮಸ್ಯೆಗಳು ವಿಶೇಷವಾಗಿ ಗ್ರಾಮೀಣ ಭಾಗದ ಹೆಣ್ಣು ಮಕ್ಕಳಲ್ಲಿ/ಮಹಿಳೆಯರಲ್ಲಿ ತುಂಬಾ ತೀವ್ರವಾಗಿರುತ್ತದೆ. ಅಪೌಷ್ಟಿಕತೆಯ ಸಾಮಾನ್ಯ ಕಾರಣಗಳು ಸಾಕಷ್ಟು ಆರೋಗ್ಯಕರ ಆಹಾರ ಮತ್ತು ಮಕ್ಕಳ ಆರೈಕೆಯ ಕೊರತೆಯಿಂದಾಗಿರುತ್ತದೆ ಎಂಬುದನ್ನು ಅರ್ಥೈಸಿ ಹೆಣ್ಣುಮಕ್ಕಳ ಆಹಾರ ಕ್ರಮವನ್ನು ತಿಳಿಸುವುದರ ಮೂಲಕ ಪೌಷ್ಟಿಕ ಮಟ್ಟವನ್ನು ಉತ್ತಮಗೊಳಿಸುವುದು.
- ✓ **ಬಾಲ್ಯವಿವಾಹ:-** ಎನ್.ಎಫ್.ಹೆಚ್. ಎಸ್.-5ರ ಸಮೀಕ್ಷೆಯ ಪ್ರಕಾರ ಕರ್ನಾಟಕ ರಾಜ್ಯದಲ್ಲಿ 21.3% ಹೆಣ್ಣು ಮಕ್ಕಳು ತಮ್ಮ ಶಿಕ್ಷಣ ಮತ್ತು ಬಾಲ್ಯದಿಂದ ವಂಚಿತರಾಗಿ ಬಾಲ್ಯ ವಿವಾಹಕ್ಕೆ ಒಳಗಾಗುತ್ತಿದ್ದಾರೆ, ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಕೊಡುವುದರಿಂದ ಮದುವೆಯ ವಯಸ್ಸನ್ನು ಮುಂದೂಡುವುದು ಹಾಗೂ ಶಿಕ್ಷಣ ಮುಂದುವರೆಸಿ ತಮಗೆ ಇಷ್ಟವಾದ ಪದವಿಯನ್ನು ಪಡೆಯಲು ಸಹಾಯವಾಗುತ್ತದೆ. ಇದರಿಂದ ಬಾಲ್ಯವಿವಾಹ ತಪ್ಪಿಸಲು ಸಾಧ್ಯವಾಗುತ್ತದೆ. ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟಗಳು ಹಾಗೂ ಸ್ವಸಹಾಯ ಗುಂಪುಗಳ ಸದಸ್ಯರಿಗೆ ಜಾಗೃತಿ ಕಾರ್ಯಕ್ರಮಗಳು ಹಾಗೂ ಪ್ರತಿಜ್ಞಾ ವಿಧಿಯನ್ನು ಬೋಧಿಸುವುದು. ಶಾಲೆಗಳಲ್ಲಿ ಮತ್ತು ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿಯೂ ಸಹ ಪ್ರತಿಜ್ಞಾ ವಿಧಿ ಚಟುವಟಿಕೆಯನ್ನು ಕೈಗೊಳ್ಳುವುದು.
- ✓ **ಹೆಣ್ಣು ಮಕ್ಕಳ ರಕ್ಷಣೆ:-** ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ, ಹೆಣ್ಣು ಮಕ್ಕಳ ಸಾಗಾಣಿಕೆ ಮತ್ತು ಇತರೆ ಸಮಸ್ಯೆಗಳನ್ನು ತಗ್ಗಿಸಲು ಹೆಣ್ಣುಮಕ್ಕಳಿಗೆ /ಮಹಿಳೆಯರಿಗೆ /ಪುರುಷರಿಗೆ/ ಹಿರಿಯನಾಗರಿಕರುಗಳಿಗೆ/ ಸಮುದಾಯಗಳಿಗೆ ಕಾನೂನಿನ ಹಕ್ಕುಗಳ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವುದು ಬಹುಮುಖ್ಯವಾಗಿದೆ. ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಭೆಯನ್ನು ನೆರವೇರಿಸುವುದು.

**ಚಟುವಟಿಕೆಗಳ ಯೋಜನೆ (Plan of Activities)**

ಮೇಲಿನ ವಿಷಯಗಳಿಗೆ ಸಂಬಂಧಿಸಿದಂತೆ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮತ್ತು ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಲ್ಲಿ **24ಜನವರಿ 2024 ರಿಂದ 15ನೇ ಫೆಬ್ರವರಿ 2024 ರವರೆಗೆ** ಈ ಮೇಲಿನ ವಿಷಯಗಳ **ಜಾಗೃತಿ ಕಾರ್ಯಕ್ರಮಗಳನ್ನು** ಮತ್ತು ಕೆಳಕಂಡಂತೆ **ಗ್ರಾಮೀಣ ಒಲಿಂಪಿಕ್ಸ್ ಕ್ರೀಡೆಗಳನ್ನು** ಆಯೋಜಿಸುವುದರ ಮೂಲಕ ಬಹಳ ಅರ್ಥಪೂರ್ಣವಾಗಿ ಮತ್ತು ವಿನೂತನವಾಗಿ **"ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ"**ಯನ್ನು ಗ್ರಾಮ ಪಂಚಾಯತಿ ಕಾರ್ಯಪಡೆ ಮತ್ತು ಗ್ರಾಮ ಪಂಚಾಯತಿ ಶಿಕ್ಷಣ ಕಾರ್ಯಪಡೆ ಸಮನ್ವಯದೊಂದಿಗೆ ಆಚರಿಸುವುದು.

1. **"ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ"ಯ ಕಾರ್ಯಕ್ರಮ** ಕುರಿತು ಘನ ತ್ಯಾಜ್ಯ ವಿಲೇವಾರಿ ವಾಹನ ಮತ್ತು ಸ್ಥಳೀಯ ಪ್ರಕಾರಗಳನ್ನು ಬಳಸಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ವ್ಯಾಪಕ ಪ್ರಚಾರ ಮಾಡುವುದು
2. ಉಲ್ಲೇಖ(2)ರ ಸುತ್ತೋಲೆಯಲ್ಲಿ 14 ನವಂಬರ್2023 ರಿಂದ 24 ಜನವರಿ2024 ರವರೆಗೆ 10 ವಾರಗಳ ಕಾಲ ಮಕ್ಕಳಿಗೆ ಸ್ಪಂದಿಸುವ ಗ್ರಾಮ ಪಂಚಾಯತಿ ಅಭಿಯಾನ ಹಾಗೂ ಮಕ್ಕಳ ವಿಶೇಷ ಗ್ರಾಮಸಭೆ ಆಯೋಜಿಸಲು ತಿಳಿಸಲಾಗಿತ್ತು. **ದಿನಾಂಕ 24-01-2024ರಂದು ಮಕ್ಕಳಿಗೆ ಸ್ಪಂದಿಸುವ ಗ್ರಾಮ ಪಂಚಾಯತಿ ಅಭಿಯಾನದ ಸಮಾರೋಪ ಮತ್ತು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯನ್ನು ಗ್ರಾಮ ಪಂಚಾಯತಿಯಿಂದ ಆಯೋಜಿಸುವುದು.**

3. ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನ ಅಥವಾ ಎಲ್ಲರಿಗೂ ಭಾಗವಹಿಸಲು ಅನುಕೂಲವಾಗುವಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಸೂಕ್ತ ಸ್ಥಳದಲ್ಲಿ ಗ್ರಾಮೀಣ ಒಲಿಂಪಿಕ್ಸ್ ಕ್ರೀಡೆಗಳನ್ನು ಆಯೋಜಿಸುವುದು.
4. ಗ್ರಾಮೀಣ ಒಲಿಂಪಿಕ್ಸ್ ಕ್ರೀಡೆಗಳ ಆಯೋಜನೆಯ ಸ್ಥಳ ಮತ್ತು ಸಮಯ ಕುರಿತು ಮಾಹಿತಿಯನ್ನು ಗ್ರಾಮ ಪಂಚಾಯತಿ ಕಛೇರಿ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಬ್ಯಾನರ್ ಮತ್ತು ಮಾಹಿತಿ ಪತ್ರ/ಕರಪತ್ರಗಳ ಮೂಲಕ ಸಮುದಾಯ ಮತ್ತು ಸಾರ್ವಜನಿಕರಿಗೆ ತಿಳಿಯಪಡಿಸುವುದು.
5. ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮದ ದಿನ ಮತ್ತು ಗ್ರಾಮೀಣ ಒಲಿಂಪಿಕ್ಸ್ ಕ್ರೀಡೆಗಳು ಹಾಗೂ ಇತರೆ ಚಟುವಟಿಕೆಗಳಲ್ಲಿ **ಬಾಲಕರು, ಬಾಲಕಿಯರು, ಪುರುಷರು, ಮಹಿಳೆಯರು, ಜಿಪಿಎಲ್‌ಎಫ್ ಒಕ್ಕೂಟದ ಸದಸ್ಯರು,ಸ್ವಸಹಾಯ ಗುಂಪುಗಳ ಮಹಿಳೆಯರು, ಗ್ರಾಮ ಪುನರ್ವಸತಿ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರು, ಆಶಾ ಕಾರ್ಯಕರ್ತೆಯರು, ಗ್ರಾ.ಮ ಪಂಚಾಯತಿ ಸಿಬ್ಬಂದಿ ಮತ್ತು ಶಾಲೆಗಳಲ್ಲಿ ಮಧ್ಯಾಹ್ನದ ಊಟ ತಯಾರಿಸುವ ಸಿಬ್ಬಂದಿಗಳಿಗೆ** ಈ ಕೆಳಕಂಡ ಆಟೋಟ/ ಚಟುವಟಿಕೆಗಳ ಸ್ಪರ್ಧೆಗಳನ್ನು ಏರ್ಪಡಿಸುವುದು.
   - ಕಬಡ್ಡಿ,ಖೊಖೋ, ಕ್ರಿಕೆಟ್,ವಾಲಿಬಾಲ್, ಬಾಲ್ ಬ್ಯಾಡ್ಮಿಂಟನ್, ಮುಂತಾದ ಕ್ರೀಡೆಗಳು
   - 100/200 ಮೀಟರ್‌ಗಳ ಓಟ, 4X100 ರಿಲೇ, ಹಗ್ಗಜಗ್ಗಾಟ, ಥ್ರೋಬಾಲ್, ಟೆನ್ನಿಕಾಯ್ಟ್(ರಿಂಗ್ ಎಸೆತ)
   - ಚಿತ್ರಕಲೆ, ರಂಗೋಲಿ, ಪ್ರಬಂಧ, ಕಥೆ ಹೇಳುವುದು, ಬಾಷಣ, ಕವನಗಳ ವಾಚನ ಮುಂತಾದ ಸ್ಪರ್ಧೆಗಳು

ಈ ರೀತಿಯಾಗಿ ಕಾರ್ಯಕ್ರಮಗಳನ್ನು ಆಯೋಜಿಸುವುದರ ಮೂಲಕ ಎಲ್ಲರಲ್ಲೂ ಸ್ಪರ್ಧಾತ್ಮಕ ಮನೋಭಾವನೆ, ಆತ್ಮಸ್ಥೈರ್ಯ, ಭಾಗವಹಿಸುವ ಮನೋಸ್ಥಿತಿ ಅಭಿವೃದ್ಧಿಗೆ ಎಡೆಮಾಡಿ ಕೊಡುವುದು. ಗ್ರಾಮೀಣ ಒಲಿಂಪಿಕ್ಸ್ ಕ್ರೀಡೆಗಳಲ್ಲಿ ಭಾಗವಹಿಸಿದ ಹೆಮ್ಮೆ ಎಲ್ಲರ ಮನದಲ್ಲಿ ಮೂಡಿ ಈ ಸಾಲಿನ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯು ರಂಜಿಸುವುದು.

ಈ ಅಭಿಯಾನಕ್ಕೆ ತಗಲುವ ವೆಚ್ಚವನ್ನು ಗ್ರಾಮ ಪಂಚಾಯತಿಯ ಅನುಮೋದನೆಯೊಂದಿಗೆ ಗ್ರಾಮ ಪಂಚಾಯತಿಯ ಸ್ವಂತ ನಿಧಿಯಿಂದ ಭರಿಸುವುದು ಹಾಗೂ ಸ್ಥಳೀಯ ದೇಣಿಗೆದಾರರ/ ಸಂಘ/ಸಂಸ್ಥೆಗಳ ಸಹಾಯ ಪಡೆಯಲು ತಿಳಿಸಿದೆ.

ತಮ್ಮ ವಿಶ್ವಾಸಿ,

ಆಯುಕ್ತರು,
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಆಯಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ , ಬಹುಮಹಡಿ ಕಟ್ಟಡ, ಬೆಂಗಳೂರು.
3. ಸಾರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತೆಆ ಇಲಾಖೆರವರ ಆಪ್ತ ಕಾರ್ಯದರ್ಶಿಗಳು,ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆರವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
5. ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ, ನೃಪತುಂಗ ರಸ್ತೆ,ಬೆಂಗಳೂರು.
6. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು ಇವರ ಆಪ್ತ ಶಾಖೆ
7. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು, ಬೆಂಗಳೂರು.
8. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯ, ಬೆಂಗಳೂರು.
9. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
10. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕೃಷಿ ಭವನ, ಹಡ್ ಸ್ ನ್ ವೃತ್ತ, ನೃಪತುಂಗ ರಸ್ತೆ, ಬೆಂಗಳೂರು.
11. ಮಾಹಿತಿ ಕೇಂದ್ರ/ವೆಬ್ ಸೈಟ್, ಗ್ರಾಅಪ ಇಲಾಖೆ
12. ಕಛೇರಿ ರಕ್ಷಾ ಕಡತಕ್ಕೆ.